ತಂತಿ ವಿಳಾಸ: ಯೂನಿರಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

# ಮೈಸೂರು ವಿಶ್ವವಿದ್ಯಾನಿಲಯ

e-mail: registrar@uni-mysore.ac.in
www.uni-mysore.ac.in
ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/110/2022-23

ದಿನಾಂಕ 10-07-2025

## ಸುತ್ತೋಲೆ

ವಿಷಯ: ಪ್ರಾರ್ಥನಾ ಸಮಯದಲ್ಲಿ ಸಂವಿಧಾನ ಪೀಠಿಕೆಯನ್ನು ಓದುವ ಬಗ್ಗೆ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬೆಂಗಳೂರು, ಇವರ ಪತ್ರದ ಸಂಖ್ಯೆ:ಸಕಇ/232/ಸಪ್ರಕಾ/2025, ದಿನಾಂಕ 20.06.2025.

****

ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ದಿನಾಂಕ 15.06.2023ರಲ್ಲಿ ಅನುಮೋದಿತವಾಗಿರುವಂತೆ ಸರ್ಕಾರದ ಆದೇಶ ಸಂಖ್ಯೆ:ಸಕಇ 69 ಪಕವಿ 2023, ದಿನಾಂಕ 30.06.2023ರಲ್ಲಿ ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿನ ಅಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪ್ರಾರ್ಥನಾ ಸಮಯದಲ್ಲಿ ಸಂವಿಧಾನ ಪೀಠಿಕೆಯನ್ನು ಓದುವುದು ಹಾಗೂ ಸಂವಿಧಾನ ಪೀಠಿಕೆಗೆ ಬದ್ಧರಾಗುವುದು. ಸಂವಿಧಾನದ ತತ್ವಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರತಿಜ್ಞೆಗೈಯುವುದು ಮತ್ತು ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದುಕಾಣುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವಂತೆ ಆದೇಶಿಸಿರುತ್ತಾರೆ(ಸಂವಿಧಾನ ಪೀಠಿಕೆಯ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿ ಲಗತ್ತಿಸಿದೆ).

ಆದುದರಿಂದ ಪ್ರಾರ್ಥನಾ ಸಮಯದಲ್ಲಿ ಸಂವಿಧಾನ ಪೀಠಿಕೆಯನ್ನು ಓದುವುದು ಹಾಗೂ ಸಂವಿಧಾನ ಪೀಠಿಕೆಯ ಭಾವಚಿತ್ರವನ್ನು ಎದ್ದುಕಾಣುವಂತೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರದರ್ಶಿಸುವಂತೆ ಕ್ರಮ ಕೈಗೊಳ್ಳುವುದು.

15/7/2025

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು ಮತ್ತು ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಘಟಕ/ಸ್ವಾಯತ್ತ ಹಾಗೂ ಎಲ್ಲಾ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಇವರಿಗೆ ಸದರಿ **ಸುತ್ತೋಲೆ ಹಾಗೂ ಸಂವಿಧಾನ ಪೀಠಿಕೆಯ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿಯನ್ನು ಮೈಸೂರು ವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
8. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಕಛೇರಿ ಪ್ರತಿ.

MANASAGANGOTHRI ★ I.D.C. UNIVERSITY OF MYSORE, MYSORE ★
MGM 1 IEC01
26/2025-26
Date:
17/07/2025

# ಭಾರತದ ಸಂವಿಧಾನ

## ಪೀಠಿಕೆ

ಭಾರತದ ಜನತೆಯಾದ ನಾವು,
ಭಾರತವನ್ನು, ಸಾರ್ವಭೌಮ, ಸಮಾಜವಾದಿ, ಧರ್ಮನಿರಪೇಕ್ಷ
ಪ್ರಜಾಸತ್ತಾತ್ಮಕ ಗಣರಾಜ್ಯವನ್ನಾಗಿ
ರೂಪಿಸುವುದಕ್ಕಾಗಿ;
ಭಾರತದ ಎಲ್ಲಾ ಪ್ರಜೆಗಳಿಗೆ
ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯವನ್ನು;
ವಿಚಾರ, ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು
ಉಪಾಸನೆಯ ಸ್ವಾತಂತ್ರ್ಯವನ್ನು;
ಸ್ಥಾನಮಾನ ಮತ್ತು ಅವಕಾಶಗಳ ಸಮಾನತೆಯನ್ನು
ದೊರೆಯುವಂತೆ ಮಾಡುವುದಕ್ಕಾಗಿ;
ವ್ಯಕ್ತಿಗೌರವ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲ್ಲಿ
ಭ್ರಾತೃತ್ವ ಭಾವನೆಯನ್ನು ಮೂಡಿಸುವುದಕ್ಕೆ
ದೃಢಸಂಕಲ್ಪ ಮಾಡಿ,
ನಮ್ಮ ಸಂವಿಧಾನ ಸಭೆಯಲ್ಲಿ
1949ನೆಯ ಇಸವಿಯ ನವೆಂಬರ್ ತಿಂಗಳ 26ನೇ ದಿನದಂದು
ಈ ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು
ಅಂಗೀಕರಿಸಿ, ಶಾಸನವಾಗಿ ವಿಧಿಸಿಕೊಂಡಿದ್ದೇವೆ.

# THE CONSTITUTION OF INDIA

## PREAMBLE

**WE, THE PEOPLE OF INDIA,**
having solemnly resolved to constitute India into a
**SOVEREIGN SOCIALIST**
**SECULAR DEMOCRATIC REPUBLIC**
and to secure to all its citizens:
**JUSTICE**, social, economic and political;
**LIBERTY** of thought, expression,
belief, faith and worship;
**EQUALITY** of status and of opportunity;
and to promote among them all
**FRATERNITY** assuring the dignity of the
individual and the unity and
integrity of the Nation;
**IN OUR CONSTITUENT ASSEMBLY**
this twenty-sixth day of November, 1949, do
**HEREBY ADOPT, ENACT AND GIVE TO OURSELVES THIS CONSTITUTION.**